# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1246
2. ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 19.12.2024
4. ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಮಂಡ್ಯ ಜಿಲ್ಲೆ ಶ್ರೀರಂಪಿಪಟ್ಟಣ ತಾಲ್ಲೂಕು ಕೃಷ್ಣರಾಜಸಾಗರದ ಬೃಂದಾವನ ಉದ್ಯಾನವನ್ನು ಪಿಪಿಪಿ ಮಾದರಿಯಲ್ಲಿ ಪ್ರಸ್ತಾವಿತ ಮೇಲ್ದರ್ಜೆಗೇರಿಸುವಿಕೆಯ ಅಭಿವೃದ್ಧಿ ಮತ್ತು ಕಾರ್ಯಾಚರಣೆ/ನಿರ್ವಹಣೆ ಕಾಮಗಾರಿಗೆ ಆರ್ಥಿಕ ಇಲಾಖೆಯ ಅನುಮೋದನೆ ಸಿಕ್ಕಿದೆಯೇ; ಇದ್ದಲ್ಲಿ ಅನುಮೋದನೆ ನೀಡಿರುವ ಒಟ್ಟು ಮೊತ್ತ ಎಷ್ಟು; (ಆದೇಶದ ಪತ್ರ ನೀಡುವುದು) | ಹೌದು. ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕು, ಕೃಷ್ಣರಾಜಸಾಗರದ ಬೃಂದಾವನ ಉದ್ಯಾನವನ್ನು ಪಿಪಿಪಿ ಮಾದರಿಯಲ್ಲಿ ಉನ್ನತೀಕರಿಸುವ ಕಾಮಗಾರಿಗೆ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ದಿನಾಂಕ:30.07.2024ರ ಆದೇಶದಲ್ಲಿ ರೂ.2663.74 ಕೋಟಿ ಮೊತ್ತಕ್ಕೆ ಅನುಮೋದನೆ ನೀಡಲಾಗಿದೆ. ಆದೇಶದ ಪ್ರತಿಯನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಆ) | ಕಾವೇರಿ ನೀರಾವರಿ ನಿಗಮ ನಿಯಮಿತ, ಕೃಷ್ಣರಾಜಸಾಗರ ವಿಭಾಗದ ವತಿಯಿಂದ ಪ್ರಸ್ತಾವಿತ ಉನ್ನತೀಕರಿಸುವ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಆರಂಭಿಸಲಾಗಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಪ್ರಸ್ತಾವಿತ ಉನ್ನತೀಕರಿಸುವ ಕಾಮಗಾರಿಗೆ ದಿನಾಂಕ:09.09.2024 ರಂದು ಕಾವೇರಿ ನೀರಾವರಿ ನಿಗಮ ನಿಯಮಿತ, ಕೃಷ್ಣರಾಜಸಾಗರ ವಿಭಾಗದ ವತಿಯಿಂದ KPP Portal ನಲ್ಲಿ ಟೆಂಡರ್ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ಯಾವುದೇ ಬಿಡ್‌ಗಳು ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ, ದಿನಾಂಕ:02.12.2024 ರಂದು ಎರಡನೇ ಕರೆಗೆ ಟೆಂಡರ್ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ದಿನಾಂಕ:16.01.2025 ರಂದು ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕವನ್ನು ನಿಗದಿಪಡಿಸಿದೆ. |
| ಇ) | ಅಭಿವೃದ್ಧಿ ಕಾಮಗಾರಿ ನಿರ್ವಹಿಸಲು ಯಾವುದಾದರೂ ಸಂಸ್ಥೆಯನ್ನು ಆಯ್ಕೆ ಮಾಡಲಾಗಿದೆಯೇ; ಇದ್ದಲ್ಲಿ, ಆ ಸಂಸ್ಥೆ ಯಾವುದು; ಹಾಗೂ, ಸದರಿ ಸಂಸ್ಥೆಯೊಂದಿಗೆ ಎಷ್ಟು ವರ್ಷದ ಅವಧಿಗೆ ಓ ಅಂಡ್ ಎಂ ಮಾಡಿಕೊಳ್ಳಲಾಗುತ್ತದೆ; (ವಿವರ ನೀಡುವುದು) ಸದರಿ ಸ್ಥಳದಲ್ಲಿ ಏನೆಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತದೆ; ಯಾವ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳ್ಳಲಿದೆ; (ಸಂಪೂರ್ಣ ವಿವರ ನೀಡುವುದು) | ಕಾಮಗಾರಿಯ ಟೆಂಡರ್ ಪ್ರಕ್ರಿಯೆಯು ಜಾರಿಯಲ್ಲಿದ್ದು, concessionaire ರನ್ನು ಅಂತಿಮಗೊಳಿಸಿರುವುದಿಲ್ಲ.<br>ಟೆಂಡರ್ ಪ್ರಕ್ರಿಯೆಯಲ್ಲಿ ಆಯ್ಕೆಗೊಳ್ಳುವ concessionaire ರೊಂದಿಗೆ 4½ ವರ್ಷಗಳ ನಿರ್ಮಾಣ ಅವಧಿ ಹಾಗೂ ನಂತರದ 30 ವರ್ಷಗಳ ನಿರ್ವಹಣಾ ಅವಧಿ ಒಳಗೊಂಡಂತೆ ಒಟ್ಟು 34½ ವರ್ಷಗಳ ಗುತ್ತಿಗೆ ಅವಧಿಯ ಪ್ರಾವಿಧಾನವಿರುತ್ತದೆ. |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
| --- | --- | --- |
| | | ಸದರಿ ಯೋಜನೆಯಡಿಯಲ್ಲಿ ಕೆಳಕಂಡ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿರುತ್ತದೆ:<br>Entrance/Toll gate, Parking & Bus Parking, Cauvery promenade & cascade, Entry plaza, Grand street, Food plaza, boating lake, Amphitheatre, Grand statue, Botanical garden, Jungle Boat ride, North garden, Grand arch, Meena bazaar, South garden, Doll museum, Jungle track, Water park, Penguin zoo, Roller coaster, Indoor amusement park, Sky bridge, River view deck, Wax & Historical museum, Tree walk, Aroma garden, Balloon ride, Water plane & Parasailing, New Bridge, Techno park, General walkway, Laser fountain show, Projection wall, Helipad, Castle/view tower, Jai Ho fountain. |
| ಈ) | ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಸಲುವಾಗಿ ಸಮಿತಿ ಹಾಗೂ ಕಾಮಗಾರಿ ಅನುಷ್ಠಾನಿಸುವಲ್ಲಿ ಉಂಟಾಗುವ ಸಮಸ್ಯೆಗಳನ್ನು ನಿಯಂತ್ರಿಸಲು ಸಲಹಾ ಸಮಿತಿಯನ್ನು ರಚಿಸಲು ಸರ್ಕಾರ ಉದ್ದೇಶಿಸಿದೆಯೇ? (ಮಾಹಿತಿ ನೀಡುವುದು) | ಪ್ರಸ್ತುತ ಸದರಿ ಸಮಿತಿಗಳನ್ನು ರಚಿಸುವ ಪ್ರಸ್ತಾವವಿರುವುದಿಲ್ಲ. |

ಸಂಖ್ಯೆ:ಜಸಂಇ 61 ಎನ್‌ಎಲ್‌ಎ 2024

**( ಡಿ. ಕೆ. ಶಿವಕುಮಾರ್ )**
**ಉಪ ಮುಖ್ಯಮಂತ್ರಿಗಳು**

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಗೆ ಉನ್ನತೀಕರಣಗೊಳಿಸುವ ಕಾಮಗಾರಿಗಳನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಚೌಕಟ್ಟಿನಲ್ಲಿ ಅನುಷ್ಠಾನಗೊಳಿಸಲು ಅನುಮೋದನೆ ನೀಡುವ ಕುರಿತು.

+++++

**ಓದಲಾಗಿದೆ:**

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಕಾನೀನಿನಿ/ ತಾಂತ್ರಿಕ-1/ Brindavan Garden/ Part-E/2024-25/75 ದಿನಾಂಕ:17.04.2024.

**ಪ್ರಸ್ತಾವನೆ :**

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜಸಾಗರ ಗ್ರಾಮದ ಸಮೀಪ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಕೃಷ್ಣರಾಜಸಾಗರ ಅಣೆಕಟ್ಟೆಯ ಕೆಳಭಾಗದಲ್ಲಿನ ಬೃಂದಾವನ ಉದ್ಯಾನವನವು ವಿಶ್ವವಿಖ್ಯಾತವಾಗಿದ್ದು, ಮೈಸೂರು ಹಾಗೂ ಸುತ್ತಮುತ್ತಲಿನ ಪ್ರವಾಸಿ ಸ್ಥಳಗಳ ಅಭಿವೃದ್ಧಿಯಿಂದ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಪ್ರವಾಸಿಗರು ಬೃಂದಾವನ ಉದ್ಯಾನವನಕ್ಕೆ ಭೇಟಿ ನೀಡುತ್ತಿದ್ದು ಪ್ರವಾಸಿಗರ ನೆಚ್ಚಿನ ತಾಣಗಳಲ್ಲಿ ಒಂದಾಗಿರುತ್ತದೆ; ಪ್ರವಾಸಿಗರ ಆಕರ್ಷಣೆಯನ್ನು ಪರಿಗಣಿಸುತ್ತಾ, ಕೃಷ್ಣರಾಜಸಾಗರ ಜಲಾಶಯದ ಕೆಳಭಾಗದಲ್ಲಿನ 198 ಎಕರೆ ಜಾಗದಲ್ಲಿ ಅಮ್ಯೂಸ್‌ಮಂಟ್ ಪಾರ್ಕ್ ಮಾದರಿಯಲ್ಲಿ ಉದ್ಯಾನವನವನ್ನು ಅಭಿವೃದ್ಧಿ, ಸೌಂದರ್ಯೀಕರಣ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳುವುದರಿಂದ ದೇಶ-ವಿದೇಶಗಳ ಸಾವಿರಾರು ಪ್ರವಾಸಿಗರು ಭೇಟಿ ನೀಡಲಿದ್ದು, ಈ ಭಾಗದಲ್ಲಿ ಪ್ರವಾಸೋದ್ಯಮವು ಮತ್ತಷ್ಟು ಅಭಿವೃದ್ಧಿಯಾಗಲಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ವರದಿ ಮಾಡಿರುತ್ತಾರೆ.

2. ಪ್ರವಾಸಿಗರ ಆಕರ್ಷಣೆಯನ್ನು ಪರಿಗಣಿಸಿ ಕೃಷ್ಣರಾಜಸಾಗರ ಜಲಾಶಯದ ಕೆಳಭಾಗದಲ್ಲಿನ ಬೃಂದಾವನವನದ ಅಭಿವೃದ್ಧಿ, ಸೌಂದರ್ಯೀಕರಣ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿ ಚಟುವಟಿಕೆಗಳನ್ನು ಉನ್ನತೀಕರಣಗೊಳಿಸುವ ಯೋಜನೆಯನ್ನು ಕೈಗೊಳ್ಳಲು 2015-16, 2018-19 ಹಾಗೂ 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿರುತ್ತದೆ ಹಾಗೂ ದಿನಾಂಕ:26.11.2019 ರಂದು ಜರುಗಿದ 20ನೇ ಪಿಪಿಪಿ ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿಯ ಸಭೆಯಲ್ಲಿ ಬೃಂದಾವನ ಉದ್ಯಾನವನವನ್ನು ಉನ್ನತೀಕರಣಗೊಳಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳಲು ನಿರ್ಣಯಿಸಿದ್ದು, ಅದರಂತೆ ಪ್ರತಿಷ್ಠಿತ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಯ ಪ್ರವಾಸೋದ್ಯಮ ಆಕರ್ಷಣೀಯ ಕೇಂದ್ರವನ್ನಾಗಿ ಉನ್ನತೀಕರಿಸುವ ಯೋಜನೆಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಕೈಗೊಳ್ಳಲಾಗುವುದೆಂದು ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ವರದಿ ಮಾಡಿರುತ್ತಾರೆ.

3. ಕೃಷ್ಣರಾಜಸಾಗರ ಜಲಾಶಯದ ಕೆಳಭಾಗದಲ್ಲಿನ 198-00 ಎಕರೆ ಜಾಗದಲ್ಲಿ ಉದ್ಯಾನವನ ಸೌಂದರ್ಯೀಕರಣ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿ ಕಾಮಗಾರಿಗಳನ್ನು DBFOT ಆಧಾರದಲ್ಲಿ ಅನುಷ್ಠಾನಗೊಳಿಸಲು 4.5 ವರ್ಷಗಳ ನಿರ್ಮಾಣ ಅವಧಿಯನ್ನು ಸೇರಿ ಒಟ್ಟು 34.5 ವರ್ಷಗಳ ರಿಯಾಯಿತಿ ಅವಧಿಯನ್ನು ಒಳಗೊಂಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರ ವರದಿ ಮಾಡಿರುತ್ತಾರೆ.

4. ಯೋಜನೆಯು ಈ ಕೆಳಕಂಡ ಧ್ಯೇಯೋದ್ದೇಶ ಹಾಗೂ ಕೆಳಕಂಡ ಮುಖ್ಯ ಅಂಶಗಳನ್ನು ಒಳಗೊಂಡಿರುತ್ತದೆ:

- To enhance economic growth by promoting tourism.
- To improve the ecosystem of Mysuru and generate employment opportunities.
- To increase International Tourist Footfall not only to Karnataka but to India and increase Domestic Tourist to Mysuru.

| | | |
|---|---|---|
| 1 | Project | • Planned to develop world class tourist destination<br>• Upgrade existing garden into an amusement park<br>• Concessionaire shall implement, operate & maintain project activities by obtaining necessary approvals. |
| 2 | Project Structuring | DBFOT (PPP) |
| 3 | Area | 198 Acres (80.13 Ha) |
| 4 | Footfall | 20,000 per day |
| 5 | Growth of footfall | 7% per year |
| 6 | Construction period | 4.5 years |
| 7 | Concession Period (excluding construction period) | 30 years |
| 8 | Total Concession Period | 34.5 years |
| 9 | Estimated Cost of Civil Works | Rs.1804.38 crores (2023-24 price level) |
| 10 | For the analysis cost has been escalated by 5% for 1 year to account for time lapse from current date to tendering time | Rs.1894.60 crores |
| 11 | Total Project cost | Rs.2663.74 crores |
| 12 | Phases of implementation | • 3 phases<br>• Duration of each phase is 1.5 years.<br>• Cost of phases: Phase-1: Rs.682.83 Cr<br>Phase-2: Rs.537.99 Cr<br>Phase-3: Rs.583.57 Cr<br>• 90% of Phase-1 to be completed to take-up Phase-2 works<br>• Phase-1 to be completed and 90% of Phase-2 to be completed to take-up Phase-3 works |

5. ಯೋಜನಾ ವರದಿಯ ಮಾಸ್ಟರ್ ಪ್ಲ್ಯಾನ್‌ನಲ್ಲಿ ಪರಿಗಣಿಸಲಾದ ಘಟಕಗಳನ್ನು ಅಭಿವೃದ್ಧಿಪಡಿಸಲು ಅಗತ್ಯವಾದ ಒಟ್ಟು ಬಂಡವಾಳ ವೆಚ್ಚವ ರೂ.2663.74 ಕೋಟಿಗಳಾಗಿದ್ದು ವಿವರವನ್ನು ಕೆಳಗಿನ ಕೋಷ್ಟಕದಲ್ಲಿ ನೀಡಲಾಗಿದೆ:

| Sl. No | Description | Landed Cost (Rs. Crores) |
|---|---|---|
| 1 | Total Civil Cost excluding GST | 1894.60 |
| 2 | Contingencies / QC @ 3% of Civil Cost | 56.84 |
| 3 | Total Estimated Project Cost (1+2) | 1951.44 |
| 4 | Financing Cost @ 2% of Civil Cost + Contingencies Cost | 39.03 |
| 5 | IE & Pre-Operative Expenses @ 1% of Civil + Contingencies Cost | 19.51 |
| 6 | Escalation Per Annum @ 5% of Civil + Contingencies Cost | 132.82 |
| 7 | Interest During Construction (IDC) for Debt Part | 520.93 |
| 8 | **Total Project Cost with IDC on Debt (3+4+5+6+7)** | **2663.74** |

6. ದಿನಾಂಕ:09.07.2019 ರಂದು ನಡೆದ ನಿಗಮದ ಮಂಡಳಿಯ 69ನೇ ಸಭೆಯಲ್ಲಿ ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ಅಭಿವೃದ್ಧಿಪಡಿಸುವ ಹಾಗೂ ಉನ್ನತೀಕರಣಗೊಳಿಸುವ ಕಾಮಗಾರಿಗಳನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಚೌಕಟ್ಟಿನಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆಯನ್ನು ನೀಡಲಾಗಿದ್ದು, ದಿನಾಂಕ:15.06.2024 ರಂದು ಜರುಗಿದ ಪಿ.ಪಿ.ಪಿ. ಯೋಜನೆಗಳ 28ನೇ ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಸದರಿ ಯೋಜನೆಯನ್ನು ಪಿಪಿಪಿ ಮಾದರಿಯಲ್ಲಿ ಮುಂದುವರೆಸಲು ಅನುಮೋದಿಸಲಾಗಿರುತ್ತದೆ. ಯೋಜನೆಯ ವೆಚ್ಚವು ರೂ.500 ಕೋಟಿ ಮೀರಿರುವುದರಿಂದ ಮುಖ್ಯಮಂತ್ರಿಗಳ ಅಧ್ಯಕ್ಷತೆ ಇರುವ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ಸಮಿತಿ ಮತ್ತು ಸಚಿವ ಸಂಪುಟದ ಅನುಮೋದನೆಗೆ ಮಂಡಿಸಲು ಸಭೆಯು ನಿರ್ದೇಶಿಸಿರುತ್ತದೆ.

7. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಜಸಂಇ 128 ಎಂಎಂಕೆ 2021 (ಭಾಗ-1),**

**ಬೆಂಗಳೂರು, ದಿನಾಂಕ:30.07.2024**

ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಗೆ ಉನ್ನತೀಕರಣಗೊಳಿಸುವ ಕಾಮಗಾರಿಗಳ ವಿಸ್ತೃತ ಯೋಜನಾ ವರದಿಯನ್ನು ಆರ್ಥಿಕ ಇಲಾಖೆ, ಯೋಜನಾ ಇಲಾಖೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯು ನೀಡಿರುವ ಅಭಿಪ್ರಾಯದನ್ವಯ ಪರಿಷ್ಕರಿಸಿ ಟೆಂಡರ್ ಮುಖಾಂತರ ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಚೌಕಟ್ಟಿನಲ್ಲಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 262 ಆಕೋ-1/2024 ದಿನಾಂಕ:22.07.2024, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: PDS-DPD/52/2024 ದಿನಾಂಕ:01.07.2024 ಮತ್ತು ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಟಿಪ್ಪಣಿ ಸಂಖ್ಯೆ: ಐಡಿಡಿ 31 ಐಟಿಎಸ್ 2021 ದಿನಾಂಕ:09.07.2024 ಗಳಲ್ಲಿ ನೀಡಿರುವ ಅಭಿಪ್ರಾಯಗಳನ್ವಯ ಮತ್ತು ದಿನಾಂಕ:26.07.2024 ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ: ಸಿ-403/2024 ಕುರಿತ ನಿರ್ಣಯದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

30/07/2024
(ಮನೋಹರ ವೈ. ರೊಟ್ಟಿ)
ವಿಶೇಷ ಕರ್ತವ್ಯಾಧಿಕಾರಿ
ಜಲಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ) / (ಇ&ಆರ್.ಎಸ್.ಎ) / (ಎ&ಇ), ಕರ್ನಾಟಕ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು
3. ಸರ್ಕಾರದ ಕಾರ್ಯದರ್ಶಿಗಳು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು
5. ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಕಾವೇರಿ ನೀರಾವರಿ ನಿಗಮ ನಿಯಮಿತ, ಮೈಸೂರು
6. ಸರ್ಕಾರದ ಜಂಟಿ ಕಾರ್ಯದರ್ಶಿಗಳು (ಸಚಿವ ಸಂಪುಟ), ವಿಧಾನ ಸೌಧ. ಬೆಂಗಳೂರು (ಪ್ರಕರಣ ಸಂಖ್ಯೆ: ಸಿ-403/2024 ದಿನಾಂಕ: 26.07.2024)
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು/ಸರ್ಕಾರದ ಜಂಟಿ ಕಾರ್ಯದರ್ಶಿಗಳು (ಕೆಬಿಜೆಎನ್) ರವರ ಆಪ್ತ ಕಾರ್ಯದರ್ಶಿಗಳು/ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ

+++++